# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತೈದನೆಯ ಅಧಿವೇಶನ

## <u>ಕಾರ್ಯಕಲಾಪಗಳ ಪಟ್ಟಿ</u>

**ಮಂಗಳವಾರ, ದಿನಾಂಕ:04ನೇ ಮಾರ್ಚ್, 2025**
**(ಸಮಯ: ಬೆಳಗ್ಗೆ 11.00 ಗಂಟೆಗೆ)**

* * *

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಒಂದನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಒಂದನೆಯ ಪಟ್ಟಿ

### 02. ಶೂನ್ಯವೇಳೆ ಪ್ರಸ್ತಾವಗಳು

### 03. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಮಾನ್ಯ ಸದಸ್ಯರುಗಳಿಗೆ ಈಗಾಗಲೇ ಒದಗಿಸಲಾಗಿರುವ ಒಂದನೇ ಮತ್ತು ಎರಡನೇ ಪಟ್ಟಿಯ ರೀತ್ಯಾ.

### 04. ಕಾರ್ಯದರ್ಶಿಯವರ ವರದಿ

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿಯವರಿಂದ ಹಾಗೂ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಕಾರ್ಯದರ್ಶಿಯವರು ಸಭೆಯ ಮುಂದೆ ಮಂಡಿಸುವುದು.

..2..

## 05. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

ಅ) "2025ನೇ ಮಾರ್ಚ್, 03ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಶಾಸಕರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಶಾಸಕರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು **ಶ್ರೀ ಐವನ್ ಡಿ'ಸೋಜಾ** ಅವರು ಸೂಚಿಸುವುದು;

ಆ) **ಡಾ: ಯತೀಂದ್ರ ಎಸ್** ಅವರು ಅನುಮೋದಿಸುವುದು.

## 06. ಗಮನ ಸೆಳೆಯುವ ಸೂಚನೆಗಳು

೦1. **ಡಾ: ತಳವಾರ್ ಸಾಬಣ್ಣ** ಅವರು ಉತ್ತರ ಕರ್ನಾಟಕದ ಹಿಂದುಳಿದ ಕಲ್ಯಾಣ ಕರ್ನಾಟಕ ಭಾಗದಲ್ಲಿ ಅಪೌಷ್ಠಿಕತೆ ಕಾರಣದಿಂದ ಹೆಣ್ಣು ಮಕ್ಕಳ ಬೆಳವಣಿಗೆ ಕುಂಠಿತವಾಗಿ ತಾಯಂದಿರ ಮರಣದ ಸಂಖ್ಯೆ ಹೆಚ್ಚುತ್ತಿರುವುದರಿಂದ, ಪೌಷ್ಠಿಕ ಆಹಾರ ಪೂರೈಕೆ ಮಾಡಿ ಮಕ್ಕಳ ಮತ್ತು ತಾಯಂದಿರ ಮರಣ ಪ್ರಮಾಣವನ್ನು ನಿಯಂತ್ರಿಸಲು ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳುವ ಕುರಿತು ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರ ಗಮನ ಸೆಳೆಯುವುದು.

೦2. **ಶ್ರೀ ಐವನ್ ಡಿ'ಸೋಜಾ** ಅವರು ರಾಜ್ಯದಲ್ಲಿ ಸೋಲಾರ್ ವಿದ್ಯುತ್‌ಚ್ಛಕ್ತಿ ಉತ್ಪಾದಿಸಲು ಪ್ರೋತ್ಸಾಹ ಮತ್ತು ಕೆಲವು ನಿರ್ಬಂಧಗಳನ್ನು ಸಡಿಲಗೊಳಿಸಲು ಯೋಜನೆಗಳನ್ನು ರೂಪಿಸುವ ಕುರಿತು ಮಾನ್ಯ ಇಂಧನ ಸಚಿವರ ಗಮನ ಸೆಳೆಯುವುದು.

೦3. **ಶ್ರೀ ಎಸ್.ಎಲ್. ಭೋಜೇಗೌಡ ಮತ್ತು ಶ್ರೀ ಕೆ. ವಿವೇಕಾನಂದ** ಅವರುಗಳು ಸರ್ಕಾರಿ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳಿಗೆ ಅಗತ್ಯವಿರುವ ಕ್ರೀಡಾ ಸಾಮಗ್ರಿಗಳನ್ನು ಖರೀದಿಸಲು ಸರ್ಕಾರ ಹೆಚ್ಚಿನ ಅನುದಾನವನ್ನು ನೀಡುವ ಮೂಲಕ ಗ್ರಾಮೀಣ ಭಾಗದ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸುವ ಕುರಿತು ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

..3..

## 07. ನಿಯಮ 330ರ ಮೇರೆಗೆ

೦1. **ಶ್ರೀ ಶಾಂತಾರಾಮ್ ಬುಡ್ನ** ಸಿದ್ದಿ ಅವರು ಉತ್ತರ ಕನ್ನಡ ಜಿಲ್ಲೆಯ ರೈತರಿಗೆ ಸೊಪ್ಪಿನ ಬೆಟ್ಟ, ಕುಮಕಿ, ಸ್ಟ್ರೀಪ್‌ಗಳ ಬಳಕೆ, ಪಾರಂಪಾರಿಕ ಅತಿಕ್ರಮಣ ಮತ್ತು ಕಾಡು ಪ್ರಾಣಿಗಳಿಂದ ಆಗುತ್ತಿರುವ ಜೀವ ಹಾಗೂ ಬೆಳೆಹಾನಿಗಳಿಗೆ ಪರಿಹಾರ ನೀಡುವಲ್ಲಿ ಆಗುತ್ತಿರುವ ವಿಳಂಬದ ಕುರಿತು ಪ್ರಸ್ತಾಪಿಸುವುದು.

೦2. **ಶ್ರೀ ಬಿ.ಕೆ. ಹರಿಪ್ರಸಾದ್** ಅವರು ಉಡುಪಿ ಜಿಲ್ಲೆ ಮಲ್ಪೆಯ ಮಹಾಲಕ್ಷ್ಮಿ ಕೋ-ಆಪರೇಟಿವ್ ಬ್ಯಾಂಕಿನಲ್ಲಿ ಗ್ರಾಹಕರು ಸಾಲಪಡೆದಿದ್ದಾರೆನ್ನುವಂತೆ ನಕಲಿ ದಾಖಲೆಗಳನ್ನು ಸೃಷ್ಟಿಸಿ ಅವ್ಯವಹಾರ ಎಸಗಿರುವ ಕುರಿತು ಪ್ರಸ್ತಾಪಿಸುವುದು.

೦3. **ಶ್ರೀ ಸಿ.ಎನ್. ಮಂಜೇಗೌಡ** ಅವರು ಮೈಸೂರು ಜಿಲ್ಲೆಯಲ್ಲಿ ಬಿದ್ದಂತಹ ಮಳೆಗೆ ಬಹುತೇಕ ಕೆರೆ-ಕಟ್ಟೆಗಳು ಭರ್ತಿಯಾಗದಿರುವುದರಿಂದ, ಕೆರೆ-ಕಟ್ಟೆಗಳನ್ನು ತುಂಬಿಸುವ ಕುರಿತು ಪ್ರಸ್ತಾಪಿಸುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.

**www.kla.kar.nic.in/council/council.htm**